ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ: ಎಡಿಎಂ2(4)ಸುತ್ತೋಲೆ-20/2018-19 ದಿನಾಂಕ:30-08-2018

**ಜ್ಞಾಪನ**

ವಿಷಯ: ಪರಿಸರ ಸ್ನೇಹಿ ಗಣಪತಿ ವಿಗ್ರಹ ಖರೀದಿಸುವಂತೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಬಗ್ಗೆ

ಉಲ್ಲೇಖ:1. ಸರ್ಕಾರದ ಪತ್ರ ಸಂಖ್ಯೆ : ಇಡಿ 79 ಎಸ್‌ಟಿಬಿ 2018 ದಿನಾಂಕ:07.08.2018.
2. ಮಾನ್ಯ ಸಚಿವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣರವರ ಟಿಪ್ಪಣಿ ಸಂಖ್ಯೆ: ಪ್ರಾಪ್ರೌಶಿಸ/265/2018-19 ದಿನಾಂಕ:16.07.2018.
3. ಡಾ. ಕೆ.ಎಂ. ಜಯರಾಮಯ್ಯ, ಮಾಜಿ ಸದಸ್ಯರು, ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರರವರ ಮನವಿ ದಿನಾಂಕ:13.07.2018.

*****

ಯಾವುದೇ ಸಾಮಾಜಿಕ ಬದಲಾವಣೆಯಾಗಲೀ ಚಿಕ್ಕ ವಯಸ್ಸಿನಲ್ಲೇ ಆಗಬೇಕು. ಮಕ್ಕಳು ಶಾಲೆಯಲ್ಲಿ ಕಲಿತ ಜ್ಞಾನ ಸಮಾಜದಲ್ಲಿ ವರ್ಗಾವಣೆಯಾಗುತ್ತದೆ. ಪರಿಸರ ಸಂರಕ್ಷಣೆ ಮತ್ತು ಸ್ವಚ್ಛತೆ ಅವರ ದೈನಂದಿನ ಜೀವನದಲ್ಲಿ ಹಾಸುಹೊಕ್ಕಾಗಬೇಕು. ವಿದ್ಯಾರ್ಥಿಗಳು ಈ ಮೌಲ್ಯಗಳನ್ನು ಮೈಗೂಡಿಸಿಕೊಳ್ಳಲು ಶಾಲಾ ಹಂತದಲ್ಲಿ ಉತ್ತಮವಾದ ಅಭ್ಯಾಸ / ಹವ್ಯಾಸಗಳನ್ನು ತಿಳಿಸುವ ಅಗತ್ಯತೆ ಇರುತ್ತದೆ.

ಗಣೇಶೋತ್ಸವ ಆಚರಣೆಗಾಗಿ ಮಕ್ಕಳು, ಹಾನಿಕಾರಕ ರಾಸಾಯನಿಕ ವಸ್ತುಗಳಿಂದ ಕೂಡಿದ ಬಣ್ಣ ಬಣ್ಣದ ವಿಗ್ರಹಗಳನ್ನು ಖರೀದಿಸಿ, ಪೂಜಿಸಿದ ನಂತರ ವಿಸರ್ಜನೆ ಮಾಡುವಾಗ ಕೆರೆಯಲ್ಲಿನ ಜಲಚರ ಜೀವಿಗಳಿಗೆ ಹಾನಿಯಾಗುವುದರೊಟ್ಟಿಗೆ ಮಾನವರಲ್ಲಿ ವಿವಿಧ ರೀತಿಯ ರೋಗಗಳಿಗೆ ಕಾರಣವಾಗುತ್ತಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಖರೀದಿಸುವಂತೆ ಅರಿವು ಮೂಡಿಸಿ ಕೆರೆಗಳ ಸಂರಕ್ಷಣೆಗೆ ಸಹಕಾರ ನೀಡುವಂತೆ ಉಲ್ಲೇಖ(3)ರ ಪತ್ರದಲ್ಲಿ ಮಾನ್ಯ ಸಚಿವರನ್ನು ಕೋರಿರುತ್ತಾರೆ.

ಉಲ್ಲೇಖ(3)ರಲ್ಲಿನ ಮನವಿ ಪತ್ರದ ಅಂಶಗಳನ್ನು ಪರಿಶೀಲಿಸಿದೆ. ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಉಪನಿರ್ದೇಶಕರುಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ನಿರ್ದೇಶಿಸಲಾಗಿದೆ.

-ಮು.ತಿ.ನೋ.

ಆದ್ದರಿಂದ, ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳು ಗಣೇಶೋತ್ಸವ ಆಚರಣೆಗಾಗಿ ಹಾನಿಕಾರಕ ರಾಸಾಯನಿಕಗಳಿಂದ ಕೂಡಿದ ಬಣ್ಣಬಣ್ಣದ ಗಣೇಶ ವಿಗ್ರಹಗಳನ್ನು ಖರೀದಿಸದಂತೆ ಹಾಗೂ ಈ ರೀತಿ ರಾಸಾಯನಿಕಗಳಿಂದ ಕೂಡಿದ ಬಣ್ಣಬಣ್ಣದ ಗಣೇಶ ವಿಗ್ರಹಗಳನ್ನು ಕೆರೆಗಳಲ್ಲಿ ವಿಸರ್ಜನೆ ಮಾಡುವುದರಿಂದಾಗುವ ದುಷ್ಪರಿಣಾಮಗಳ ಕುರಿತು ಮಕ್ಕಳಿಗೆ ಶಾಲೆಗಳಲ್ಲಿ ಶಿಕ್ಷಕರು ಅರಿವು ಮೂಡಿಸಿ, ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಖರೀದಿಸುವ ಮೂಲಕ ಪರಿಸರ ಸಂರಕ್ಷಣೆ ಹಾಗೂ ಕೆರೆಗಳ ಸಂರಕ್ಷಣೆಗೆ ಸಹಕಾರಿಯಾಗುವಂತೆ ಕ್ರಮ ವಹಿಸಲು ಹಾಗೂ ಕೈಗೊಂಡ ಕ್ರಮದ ಬಗ್ಗೆ ವರದಿ ಮಾಡಲು ತಿಳಿಸಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

**ಇವರಿಗೆ**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳನ್ನು**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ, ಬೆಂಗಳೂರುವರಿಗೆ ಮಾಹಿತಿಗಾಗಿ.
3. ಆಯುಕ್ತರ ಆಪ್ತ ಕಾರ್ಯದರ್ಶಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಅಪರ ಆಯುಕ್ತರು, ಧಾರವಾಡ/ಕಲಬುರಗಿ ಆಯುಕ್ತಾಲಯರವರಿಗೆ ಮಾಹಿತಿಗಾಗಿ.
5. ನಿರ್ದೇಶಕರು (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
7. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ ರಸ್ತೆ, ಬೆಂಗಳೂರು.
8. ನಿರ್ದೇಶಕರು, ರೀಜನಲ್ ಇನ್ಸ್ಟಿಟ್ಯೂಟ್ ಆಫ್ ಇಂಗ್ಲೀಷ್, ಜ್ಞಾನ ಭಾರತಿ, ಬೆಂಗಳೂರು.
9. ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು.
10. ಶ್ರೀ ಕೆ.ಎಂ. ಜಯರಾಮಯ್ಯ, ಮಾಜಿ ಸದಸ್ಯರು, ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ, ಮೈಸೂರುರವರಿಗೆ ಮಾಹಿತಿಗಾಗಿ.
11. ಕಛೇರಿ ಪ್ರತಿ.